# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1186 (1317) |
| ಮಾನ್ಯ ಸದಸ್ಯರ ಹೆಸರು | ಶ್ರೀ ಐವನ್ ಡಿ ಸೋಜಾ (ವಿಧಾನಸಭಾ ಕ್ಷೇತ್ರ) |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 16.03.2026 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮಂಗಳೂರು ವಿಶ್ವವಿದ್ಯಾನಿಲಯ ಅಧೀನಕ್ಕೆ ಒಳಪಟ್ಟ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2023-24, 2024-25 ಮತ್ತು 2025-26 ರಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; | ಮಂಗಳೂರು ವಿಶ್ವವಿದ್ಯಾಲಯದ ಅಧೀನದಲ್ಲಿ ಬರುವ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳ ಸಂಖ್ಯೆ ವಿವರಗಳು ಕೆಳಕಂಡಂತಿದೆ. |

| ವರ್ಷ | ಪದವಿ ಕಾಲೇಜುಗಳಲ್ಲಿ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳ ಒಟ್ಟು ಸಂಖ್ಯೆ |
|---|---|
| 2023-24 | 70,444 |
| 2024-25 | 65,835 |
| 2025-26 | 63,217 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಆ) | ಸದರಿ ಕಾಲೇಜುಗಳಲ್ಲಿ ಎಷ್ಟು ಉಪನ್ಯಾಸಕರ ಹುದ್ದೆ ಖಾಲಿ ಇದೆ; ಪ್ರಸ್ತುತ ಇರುವ ಹುದ್ದೆಗಳೆಷ್ಟು; ಗುತ್ತಿಗೆ ಆಧಾರದ ಹುದ್ದೆಗಳು ಹಾಗೂ ಖಾಯಂ ಇರುವ ಹುದ್ದೆಗಳು ಎಷ್ಟು; (ವಿವರ ನೀಡುವುದು); | ಮಂಗಳೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳಲ್ಲಿ ಮಂಜೂರಾದ ಉಪನ್ಯಾಸಕರ ಹುದ್ದೆಗಳ ವಿವರಗಳು ಈ ಕೆಳಕಂಡಂತಿದೆ. |

| ಕಾಲೇಜು ಹೆಸರು | ಹುದ್ದೆ | ಮಂಜೂರಾದ ಹುದ್ದೆ | ಭರ್ತಿಯಾದ ಹುದ್ದೆ | ಖಾಲಿ ಹುದ್ದೆ |
|---|---|---|---|---|
| ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು | ಸಹಾಯಕ ಪ್ರಾಧ್ಯಾಪಕರು | 56 | 22 | 34 |
| ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ | ಸಹಾಯಕ ಪ್ರಾಧ್ಯಾಪಕರು | 44 | 31 | 13 |
| ವಿಶ್ವವಿದ್ಯಾನಿಲಯ ಪ್ರಥಮ ದರ್ಜೆ ಕಾಲೇಜು, ಮಂಗಳ ಗಂಗೋತ್ರಿ | - | - | - | - |

<table>
<tr>
<td></td>
<td></td>
<td>
<table>
<tr><td>ವಿಶ್ವವಿದ್ಯಾನಿಲಯ ಕಾಲೇಜು, ನೆಲ್ಯಾಡಿ</td><td>-</td><td>-</td><td>-</td><td>-</td></tr>
<tr><td>ವಿಶ್ವವಿದ್ಯಾನಿಲಯ ಕಾಲೇಜು, ಬನ್ನಡ್ಕ</td><td>-</td><td>-</td><td>-</td><td>-</td></tr>
<tr><td colspan="2">ಒಟ್ಟು</td><td>100</td><td>53</td><td>47</td></tr>
</table>
ಗುತ್ತಿಗೆ ಆಧಾರದ ಮೇಲೆ ಯಾವುದೇ ಹುದ್ದೆಗಳನ್ನು ಭರ್ತಿ ಮಾಡಿಕೊಂಡಿರುವುದಿಲ್ಲ.
</td>
</tr>
<tr>
<td>ಇ)</td>
<td>ಮಂಗಳೂರು ವಿಶ್ವವಿದಾನಿಲಯದ ಆರ್ಥಿಕ ಪರಿಸ್ಥಿತಿ ಸುಧಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;</td>
<td>ಮಂಗಳೂರು ವಿಶ್ವವಿದ್ಯಾನಿಲಯದ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಲು ಸರ್ಕಾರವು ಕಳೆದ ಎರಡು ವರ್ಷಗಳಲ್ಲಿ ಕೆಳಕಂಡಂತೆ ಅನುದಾನವನ್ನು ಬಿಡುಗಡೆಗೊಳಿಸಿರುತ್ತದೆ:
<table>
<tr><th>ಆರ್ಥಿಕ ವರ್ಷ</th><th>ಉದ್ದೇಶ</th><th>ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ)</th></tr>
<tr><td rowspan="3">2024-25</td><td>ವೇತನಕ್ಕಾಗಿ</td><td>5821.25</td></tr>
<tr><td>ವಿಶ್ರಾಂತಿ ವೇತನಕ್ಕಾಗಿ</td><td>2130.00</td></tr>
<tr><td>ಅಭಿವೃದ್ಧಿಗಾಗಿ</td><td>100.00</td></tr>
<tr><td rowspan="2">2025-26</td><td>ವೇತನಕ್ಕಾಗಿ</td><td>6334.66</td></tr>
<tr><td>ವಿಶ್ರಾಂತಿ ವೇತನಕ್ಕಾಗಿ</td><td>3000.00</td></tr>
</table>
ಮಂಗಳೂರು ವಿಶ್ವವಿದ್ಯಾಲಯದ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಲು ಆರ್ಥಿಕ ಇಲಾಖೆ/ಸರ್ಕಾರದ ಪೂರ್ವ ಸಹಮತಿ ಪಡೆಯದೆ ಯಾವುದೇ ಹೊಸ ವಿಭಾಗಗಳನ್ನು ವಿಶ್ವವಿದ್ಯಾಲಯದ ಹಂತದಲ್ಲಿ ಪ್ರಾರಂಭಿಸಬಾರದೆಂದು, ವಿಶ್ವವಿದ್ಯಾಲಯದ ಅನಗತ್ಯ ವೆಚ್ಚಗಳನ್ನು ಕಡಿತಗೊಳಿಸುವಂತೆ, ಮಂಜೂರಾದ ಹುದ್ದೆಗಳಿಗಿಂತ ಹೆಚ್ಚಿನ ಬೋಧಕ/ಬೋಧಕೇತರ ಹುದ್ದೆಗಳಿಗೆ ನೇಮಕ ಮಾಡಿಕೊಂಡಿರುವವರನ್ನು ಬಿಡುಗಡೆಗೊಳಿಸುವಂತೆ ಹಾಗೂ ನಿರ್ದಿಷ್ಟ ಮೊತ್ತವನ್ನು ಪಿಂಚಣಿಗಾಗಿ ಪ್ರತ್ಯೇಕವಾಗಿ ಠೇವಣಿ ಇಡುವಂತೆ ಸೂಚಿಸಲಾಗಿದೆ.
</td>
</tr>
<tr>
<td>ಈ)</td>
<td>ವಿಶ್ವವಿದ್ಯಾನಿಲಯಗಳು ಆರ್ಥಿಕ ಸಂಕಷ್ಟ ಎದುರಿಸುತ್ತಿದೆ ಎಂಬ ಸುದ್ದಿಗಳಾಗಿದ್ದು, ಪ್ರಸ್ತುತ ಜಿಲ್ಲೆಗೊಂದು ವಿಶ್ವವಿದ್ಯಾಲಯ ಸ್ಥಾಪಿಸಬೇಕೆಂಬ ನಿರ್ಣಯ</td>
<td>ರಾಜ್ಯದ ಎಲ್ಲಾ ಸಾರ್ವಜನಿಕ ವಿದ್ಯಾಲಯಗಳ ಆರ್ಥಿಕ ಸ್ಥಿತಿಗತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡುವಂತೆ ಸರ್ಕಾರದಿಂದ ಮಾನ್ಯ ಉಪ ಮುಖ್ಯಮಂತ್ರಿಗಳ ಅಧ್ಯತೆಯಲ್ಲಿ ಸಚಿವ ಸಂಪುಟ ಉಪ ಸಮಿತಿಯನ್ನು ರಚಿಸಲಾಗಿದೆ. ಸದರಿ ಸಮಿತಿಯು ದಿನಾಂಕ:13.02.2025 ಮತ್ತು 09.05.2025 ರಂದು ಸಭೆಗಳನ್ನು ನಡೆಸಿದ್ದು, ಪ್ರಸ್ತುತ ಇಲ್ಲಿಯವರೆಗೆ ಶಿಫಾರಸ್ಸುಗಳನ್ನು ನೀಡಿರುವುದಿಲ್ಲ. ಸದರಿ ಸಮಿತಿಯು ನೀಡುವ ಶಿಫಾರಸ್ಸುಗಳನ್ನು</td>
</tr>
</table>

| | | |
|---|---|---|
| | ಯಾವ ಹಂತದಲ್ಲಿದೆ; ಎಷ್ಟು ಜಿಲ್ಲೆಗಳಲ್ಲಿ ವಿಶ್ವವಿದ್ಯಾನಿಲಯ ಸ್ಥಾಪಿಸಲಾಗಿದೆ? (ವಿವರ ನೀಡುವುದು) | ಪರಿಶೀಲಿಸಿ ಸಚಿವ ಸಂಪುಟದ ಮುಂದೆ ಮಂಡಿಸಿ, ವಿಶ್ವವಿದ್ಯಾನಿಲಯಗಳು ಶೈಕ್ಷಣಿಕವಾಗಿ ಹಾಗೂ ಆಡಳಿತಾತ್ಮಕವಾಗಿ ಸದೃಡಗೊಳ್ಳಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತದೆ ಉನ್ನತ ಶಿಕ್ಷಣ ಇಲಾಖೆಯಡಿ ಹೊಸದಾಗಿ ಜಿಲ್ಲೆಗೊಂದರಂತೆ ಸರ್ಕಾರಿ ವಿಶ್ವವಿದ್ಯಾನಿಲಯಗಳನ್ನು ಸ್ಥಾಪಿಸುವುದಕ್ಕೆ ಸಂಬಂಧಿಸಿದಂತೆ, ಹಾವೇರಿ, ಕೊಡಗು, ಬಾಗಲಕೋಟೆ, ಬೀದರ್, ಕೊಪ್ಪಳ, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಒಟ್ಟು 07 ವಿಶ್ವವಿದ್ಯಾನಿಲಯಗಳನ್ನು ಸ್ಥಾಪಿಸಲಾಗಿದೆ. ಕರ್ನಾಟಕ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ಥಾಪನೆಯಾಗಿರುವ 32 ಸಾರ್ವಜನಿಕ ವಿಶ್ವವಿದ್ಯಾನಿಲಯಗಳ ಪಟ್ಟಿಯನ್ನು **ಅನುಬಂಧ**ದಲ್ಲಿ ಒದಗಿಸಲಾಗಿದೆ. |

**ಸಂಖ್ಯೆ: ಇಡಿ/35/ಯುಡಿವಿ/2026**

(ಡಾ|| ಎಂ.ಸಿ. ಸುಧಾಕರ್)

ಉನ್ನತ ಶಿಕ್ಷಣ ಸಚಿವರು

ಅನುಬಂಧ

**ಸಾರ್ವಜನಿಕ ವಿಶ್ವವಿದ್ಯಾಲಯಗಳ ಪಟ್ಟಿ**

1. ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-560056
2. ಕುಲಸಚಿವರು, ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯ, ಸೆಂಟ್ರಲ್ ಕಾಲೇಜು ಆವರಣ, ಬೆಂಗಳೂರು.
3. ಕುಲಸಚಿವರು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಟಮಕ, ಕೋಲಾರ
4. ಕುಲಸಚಿವರು, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ
5. ಕುಲಸಚಿವರು, ತುಮಕೂರು ವಿಶ್ವವಿದ್ಯಾಲಯ, ತುಮಕೂರು-572101
6. ಕುಲಸಚಿವರು, ಮೈಸೂರು ವಿಶ್ವವಿದ್ಯಾಲಯ, ಮೈಸೂರು-560005
7. ಕುಲಸಚಿವರು, ಹಾಸನ ವಿಶ್ವವಿದ್ಯಾಲಯ, ಹಾಸನ
8. ಕುಲಸಚಿವರು, ಚಾಮರಾಜನಗರ ವಿಶ್ವವಿದ್ಯಾಲಯ, ಚಾಮರಾಜನಗರ
9. ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ-580033
10. ಕುಲಸಚಿವರು, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ, ರಾಯಚೂರು
11. ಕುಲಸಚಿವರು, ಕುವೆಂಪು ವಿಶ್ವವಿದ್ಯಾಲಯ, ಶಿವಮೊಗ್ಗ
12. ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ
13. ಕುಲಸಚಿವರು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು-570006
14. ಕುಲಸಚಿವರು, ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು
15. ಕುಲಸಚಿವರು, ಬೀದರ್ ವಿಶ್ವವಿದ್ಯಾಲಯ, ಬೀದರ್
16. ಕುಲಸಚಿವರು, ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು
17. ಕುಲಸಚಿವರು, ನೃಪತುಂಗ ವಿಶ್ವವಿದ್ಯಾಲಯ, ನೃಪತುಂಗ ರಸ್ತೆ, ಬೆಂಗಳೂರು-560001
18. ಕುಲಸಚಿವರು, ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ
19. ಕುಲಸಚಿವರು, ಕೊಪ್ಪಳ ವಿಶ್ವವಿದ್ಯಾಲಯ, ಕೊಪ್ಪಳ
20. ಕುಲಸಚಿವರು, ಕರ್ನಾಟಕ ರಾಜ್ಯ ಜಾನಪದ ವಿಶ್ವವಿದ್ಯಾಲಯ, ಗೋಟಗೋಡಿ, ಶಿಗ್ಗಾವಿ ತಾಲ್ಲೂಕು, ಹಾವೇರಿ ಜಿಲ್ಲೆ
21. ಕುಲಸಚಿವರು, ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶನ ಕಲೆಗಳ ವಿಶ್ವವಿದ್ಯಾಲಯ, ಮೈಸೂರು
22. ಕುಲಸಚಿವರು, ಗುಲ್ಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ
23. ಕುಲಸಚಿವರು, ಕನ್ನಡ ವಿಶ್ವವಿದ್ಯಾಲಯ, ಹಂಪಿ-583278
24. ಕುಲಸಚಿವರು, ಬಾಗಲಕೋಟೆ ವಿಶ್ವವಿದ್ಯಾಲಯ, ಬಾಗಲಕೋಟೆ
25. ಕುಲಸಚಿವರು, ಹಾವೇರಿ ವಿಶ್ವವಿದ್ಯಾಲಯ, ಹಾವೇರಿ
26. ಕುಲಸಚಿವರು, ಕರ್ನಾಟಕ ರಾಜ್ಯ ಅಕ್ಕ ಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ
27. ಕುಲಸಚಿವರು, ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ
28. ಕುಲಸಚಿವರು, ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು
29. ಕುಲಸಚಿವರು, ಕೊಡಗು ವಿಶ್ವವಿದ್ಯಾಲಯ, ಕೊಡಗು
30. ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ
31. ಕುಲಸಚಿವರು, ವಿಶ್ವೇಶ್ವರಯ್ಯ ಇಂಜಿನಿಯರಿಂಗ್ ಕಾಲೇಜು ವಿಶ್ವವಿದ್ಯಾಲಯ, ಬೆಂಗಳೂರು
32. ಕುಲಸಚಿವರು, ಡಾ. ಬಿ.ಆರ್.ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಯುನಿವರ್ಸಿಟಿ, ಬೆಂಗಳೂರು-560056